# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1135 |
| ಉತ್ತರಿಸಬೇಕಾದ ದಿನಾಂಕ | : | 28.12.2022 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಗೋಹತ್ಯೆ ನಿಷೇಧದಿಂದ ರಾಜ್ಯದಲ್ಲಿ ಹೆಚ್ಚುತ್ತಿರುವ ದನಗಳ ಸಂಖ್ಯೆ ಎಷ್ಟು; ಈ ಎಲ್ಲಾ ಪಶುಗಳ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಭಾರತ ಸರ್ಕಾರದಿಂದ ಬಿಡುಗಡೆಯಾದ 20ನೇ ಜಾನುವಾರು ಗಣತಿ-2019ರ ಪ್ರಕಾರ ರಾಜ್ಯದಲ್ಲಿ ಒಟ್ಟು 1,14,53,564 ಜಾನುವಾರುಗಳಿವೆ. ಜಾನುವಾರು ಗಣತಿ ಪ್ರತಿ 5 ವರ್ಷಗಳಿಗೊಮ್ಮೆ ನಡೆಯುತ್ತದೆ. 2023ನೇ ಸಾಲಿನಲ್ಲಿ ನಡೆಯುವ ಜಾನುವಾರು ಗಣತಿ ನಂತರ ರಾಜ್ಯದಲ್ಲಿ ಹೆಚ್ಚುತ್ತಿರುವ ದನಗಳ ಸಂಖ್ಯೆ ವಿವರ ಲಭ್ಯವಾಗುವುದು.<br><br>2021-22 ನೇ ಸಾಲಿನಲ್ಲಿ ಪ್ರತಿ ಜಿಲ್ಲೆಗೆ ಒಂದು ಸರ್ಕಾರಿ ಗೋಶಾಲೆ ನಿರ್ಮಾಣ ಮಾಡುವ ಕಾರ್ಯ ಪ್ರಾರಂಭಿಸಲಾಗಿದೆ. ಇದರಲ್ಲಿ ಈಗಾಗಲೇ 12 ಜಿಲ್ಲೆಗಳ ಗೋಶಾಲೆಗಳಲ್ಲಿ ಜಾನುವಾರುಗಳನ್ನು ನಿರ್ವಹಣೆ ಮಾಡಲಾಗುತ್ತಿದೆ.<br><br>2022-23ನೇ ಸಾಲಿನಲ್ಲಿ ಹೊಸದಾಗಿದೆ 70 ಸರ್ಕಾರಿ ಗೋಶಾಲೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ.<br><br>ಅಲ್ಲದೇ ರಾಜ್ಯದಲ್ಲಿ 219 ಖಾಸಗಿ ಪಿಂಜರಾಪೋಲ್ ಗೋಶಾಲೆಗಳು ಕಾರ್ಯನಿರ್ವಹಿಸುತಿವೆ. ರೈತರು ಸಾಕಲಾಗದ, ಅಶ್ಯಕ್ತ ಹಾಗೂ ಗೋ ಹತ್ಯೆ ನಿಷೇಧ ಕಾಯಿದೆಯ ಉಲ್ಲಂಘನೆಯಿಂದ ವಶಪಡಿಸಿಕೊಂಡ ಜಾನುವಾರುಗಳನ್ನು ಈ ಗೋಶಾಲೆಗಳಲ್ಲಿ ಸಂರಕ್ಷಿಸಲಾಗುತ್ತಿದೆ. ಈ ಗೋಶಾಲೆಗಳಿಗೆ ವಂಟನದ ಲಭ್ಯತೆಗೆ ಅನುಗುಣವಾಗಿ ಸರ್ಕಾರದಿಂದ ಪ್ರತಿ ವರ್ಷ ಅನುದಾನ ನೀಡಲಾಗುತ್ತಿದೆ. ಗೋಶಾಲೆಗಳಲ್ಲಿರುವ ಜಾನುವಾರುಗಳ ಪೋಷಣೆಗಾಗಿ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಸಹಭಾಗಿತ್ವಕ್ಕಾಗಿ ಪುಣ್ಯ ಕೋಟಿ ದತ್ತು ಯೋಜನೆ ಪ್ರಾರಂಭಿಸಲಾಗಿದೆ.<br><br>2022-23ನೇ ಸಾಲಿನಲ್ಲಿ ಖಾಸಗಿ ಪಿಂಜರಾಪೋಲ್ ಗೋಶಾಲೆಗಳಲ್ಲಿರುವ ಜಾನುವಾರುಗಳ ನಿರ್ವಹಣೆಗೆ ರೂ.375.00 ಲಕ್ಷ ಅನುದಾನ ನೀಡಲಾಗಿದೆ. |
| ಆ | ಗೋ ಶಾಲೆಗಳಲ್ಲಿ ಈ ಸಾಲಿನಲ್ಲಿ ಸೇರ್ಪಡೆಯಾಗಿರುವ ದನಗಳ ಸಂಖ್ಯೆ ಎಷ್ಟು; | ಸರ್ಕಾರದ 12 ಸುಮಾರು 218 ಜಾನುವಾರುಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. |

| | | |
|---|---|---|
| ಇ | ಕಸಾಯಿಖಾನೆಗೆ ತೆರಳದೆ ರೈತರ ಬಳಿ ರಕ್ಷಣೆ ಪಡೆದಿರುವ ಸಹಸ್ರಾರು ಪಶುಗಳನ್ನು ನೋಡಿಕೊಳ್ಳುವ ಜವಾಬ್ದಾರಿ ರೈತನ ಮೇಲಿದ್ದು, ಇಂತಹ ರೈತರಿಗೆ ನೆರವಾಗಲು ಸರ್ಕಾರ ಯಾವ ಯೋಜನೆಯನ್ನು ರೂಪಿಸಿದೆ? | ರೈತರ ಬಳಿ ರಕ್ಷಣೆ ಪಡೆದಿರುವ ಸಹಸ್ರಾರು ಪಶುಗಳನ್ನು ನೋಡಿಕೊಳ್ಳುವ ಜವಾಬ್ದಾರಿ ರೈತನ ಮೇಲಿದ್ದು, ಇಂತಹ ರೈತರಿಗೆ ನೆರವಾಗಲು ಸರ್ಕಾರ ಯಾವ ಯೋಜನೆಯನ್ನು ರೂಪಿಸಿರುವುದಿಲ್ಲ.<br><br>ರೈತರು ಸಾಕಲಾಗದ ಜಾನುವಾರುಗಳನ್ನು ಹತ್ತಿರದ ಸರ್ಕಾರಿ ಹಾಗೂ ಖಾಸಗಿ ಪಿಂಜರಾಪೋಲ್ ಗೋಶಾಲೆಗಳಿಗೆ ನೀಡಬಹುದಾಗಿದೆ. ಈ ಗೋಶಾಲೆಗಳಲ್ಲಿ ಈ ಜಾನುವಾರುಗಳನ್ನು ನಿರ್ವಹಣೆ ಮಾಡಲಾಗುತ್ತದೆ.<br><br>ಸರ್ಕಾರಿ ಗೋಶಾಲೆಗಳಲ್ಲಿರುವ ಜಾನುವಾರುಗಳನ್ನು ಉಚಿತವಾಗಿ ನಿರ್ವಹಣೆ ಮಾಡಲಾಗುತ್ತಿದೆ.<br><br>ಖಾಸಗಿ ಗೋಶಾಲೆಗಳಲ್ಲಿರುವ ಜಾನುವಾರುಗಳ ನಿರ್ವಹಣೆಗೆ ಸರ್ಕಾರದಿಂದ ವಂಟನದ ಲಭ್ಯತೆಗೆ ಅನುಗುಣವಾಗಿ ಪ್ರತಿ ಜಾನುವಾರಿಗೆ ಪ್ರತಿ ದಿನಕ್ಕೆ ಪ್ರತಿ ಜಾನುವಾರಿಗೆ ರೂ.17.50 ರಂತೆ ಸಹಾಯಾನುದಾನ ನೀಡಲಾಗುತ್ತಿದೆ. |

**ಇ–ಪಸಂಮೀ 313 ಸಲೆವಿ 2022**

**ಪ್ರಭು ಬಿ. ಚವ್ಹಾಣ್**
**ಪಶುಸಂಗೋಪನೆ ಸಚಿವರು**